# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 685 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ ನಮೋಶಿ |
| ಉತ್ತರಿಸಬೇಕಾದ ದಿನಾಂಕ | 23/12/2022 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಶ್ರೀ ಕುಮಾರ ನಾಯಕರವರ ವರದಿಯ ಪ್ರಕಾರ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ದಿನಾಂಕ:01-06.2016 ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಮಾಜ ಕಲ್ಯಾಣ ಇಲಾಖೆಯ ಕ.ವ.ಶಿ.ಸ ಸಂಘದ ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು, ಸರ್ಕಾರ ತಿರಸ್ಕರಿಸಿರುವುದು ನಿಜವೇ; | ಹೌದು.<br><br>ಶ್ರೀ. ಜಿ. ಕುಮಾರ ನಾಯಕ ಭಾ.ಆ.ಸೇ., ಅಂದಿನ ಸರ್ಕಾರದ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆರವರ ವರದಿಯನ್ವಯ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿ ಆದೇಶ ಹೊರಡಿಸಿರುವ ಮಾದರಿಯಲ್ಲಿಯೇ ವಸತಿ ಶಾಲಾ ಶಿಕ್ಷಕರುಗಳಿಗೂ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. |
| ಆ | ಶಿಕ್ಷಣ ಇಲಾಖೆಯ ವೇತನ ಶ್ರೇಣಿಯಲ್ಲಿಯೇ ಸೇವೆ ಸಲ್ಲಿಸುತ್ತಿರುವ ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡದಿರುವುದು ಸರಿಯೇ; (ವಿವರ ನೀಡುವುದು) | ಸರ್ಕಾರದ ಪತ್ರದ ಸಂಖ್ಯೆ ಸಕಇ 144 ಮೊದೇಶಾ 2017 ರಲ್ಲಿ ಈ ಕೆಳಕಂಡ ಕಾರಣಗಳಿಂದ ಸದರಿ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ದಿನಾಂಕ:27.08.2019 ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ತಿಳಿಸಿದೆ.<br>1) ಸದರಿ ಸಮಿತಿಯ ಶಿಫಾರಸ್ಸು ಶಿಕ್ಷಣ ಇಲಾಖೆಯ ಪ್ರೌಢಶಾಲೆ & ಪದವಿ ಪೂರ್ವ ಕಾಲೇಜುಗಳ ಶಿಕ್ಷಕರುಗಳಿಗೆ ಮಾತ್ರ ಸಂಬಂಧಿಸಿದ್ದಾಗಿದ್ದು, ಸಂಘದ ವಸತಿ ಶಾಲೆಗಳು 6 ರಿಂದ 10ನೇ ತರಗತಿಯ ವರೆಗೆ ಮಾತ್ರ ಇರುತ್ತದೆ.<br>2) 2012ರ ಪರಿಷ್ಕೃತ ವೇತನ ಶ್ರೇಣಿಗಳು ಚಾಲ್ತಿಯಲ್ಲಿರುವುದಿಲ್ಲವಾದ್ದರಿಂದ ಇಲಾಖೆಯ ಬೇಡಿಕೆಯಂತೆ, ಹೆಚ್ಚುವರಿ ವೇತನ ಬಡ್ತಿಯನ್ನು 2012ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಪರಿಗಣಿಸಿ ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>3) ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯದಲ್ಲಿ ದಾಖಲಾಗಿದ್ದ ನ್ಯಾಯಾಂಗ ನಿಂದನಾ ಅರ್ಜಿ |

| | | |
|---|---|---|
| | | ವಿಚಾರಣೆ ಸಂದರ್ಭದಲ್ಲಿಯೂ ಸಹ ಸರ್ಕಾರವು ವಸತಿ ಶಾಲೆ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲವೆಂದು ಹೇಳಿಕೆ ಸಲ್ಲಿಸಿರುತ್ತದೆ.<br>4) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಬೇರೆ ಬೇರೆಯಾಗಿದ್ದು, ಒಂದರ ನಿಯಮವನ್ನು ಮತ್ತೊಂದಕ್ಕೆ ಹೋಲಿಸಿ ಅನ್ವಯಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ತಿಳಿಸಿರುತ್ತದೆ.<br>ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸಂಘದ ಖಾಯಂ ಬೋಧಕ ಸಿಬ್ಬಂದಿಗಳಿಗೆ ಶ್ರೀ.ಜಿ.ಕುಮಾರ ನಾಯಕ ಸಮಿತಿಯ ಶಿಫಾರಸ್ಸಿನಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡಲು ಸಾಧ್ಯವಾಗಿರುವುದಿಲ್ಲ. |

ಸಕಇ 461 ಎಂಡಿಎಸ್ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು